ಮಿನಿ ವಿಧಾನಸೌಧವನ್ನು ನಿರ್ಮಿಸದೇ ಇರುವುದು

885 (1136); ಶ್ರೀ ಭೀಮಾನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ)

ಅ) ಹಗರಿಬೊಮ್ಮನಹಳ್ಳಿ ತಾಲ್ಲೂಕಿನಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದೆಯೇ;

ಆ) ಹಾಗಿದ್ದಲ್ಲಿ, ಕಟ್ಟಡದ ನಿರ್ಮಾಣಕ್ಕಾಗಿ ಟೆಂಡರ್ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆಯೇ;

ಇ) ಹಾಗಿದ್ದಲ್ಲಿ, ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರ ನಿಗದಿಪಡಿಸಿ ಬಿಡುಗಡೆ ಮಾಡಿರುವ ಅಂದಾಜು ಮೊತ್ತವೆಷ್ಟು;

ಈ) ಈ ಕಟ್ಟಡ ನಿರ್ಮಾಣದ ಕಾಮಗಾರಿಯನ್ನು ಯಾವ ಸಂಸ್ಥೆಗೆ ವಹಿಸಿಕೊಡಲಾಗಿದೆ? (ಸಂಸ್ಥೆಯ ಪೂರ್ಣ ವಿವರಗಳನ್ನು ನೀಡುವುದು)

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಹೌದು.

ಆ) ಇಲ್ಲ.

ಇ) ಹಗರಿಬೊಮ್ಮನಹಳ್ಳಿ ತಾಲ್ಲೂಕು ಮಿನಿ ವಿಧಾನಸೌಧ ಕಾಮಗಾರಿಯನ್ನು ₹ 250.00 ಲಕ್ಷಗಳಲ್ಲಿ ನಿರ್ವಹಿಸಲು ಅನುಮೋದನೆ ನೀಡಿ ₹ 100.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.

ಈ) ಕರ್ನಾಟಕ ಗೃಹ ಮಂಡಳಿ.